**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. ಸಂಖ್ಯೆಃ 1505/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ರವಿ
ತಂದೆ - ಸಿದ್ದೇಗೌಡ,
ಸುಮಾರು 40 ವರ್ಷ ವಯಸ್ಸು,
ವಾಸಃ ನಾಡಪ್ಪನಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀಮತಿ ನಮ್ರತಾ ಎಸ್. ಹೊಸಮಠ, ಬಿ.ಎ., ಎಲ್.ಎಲ್.ಬಿ., ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 04.09.2021 ರಂದು ಬೆಳಿಗ್ಗೆ 9.00 ಗಂಟೆ ಸಮಯದಲ್ಲಿ ಹುಣಸೂರು ತಾಲ್ಲೂಕು, ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ನಾಡಪ್ಪನಹಳ್ಳಿ ಗ್ರಾಮದಲ್ಲಿರುವ ಸಾಕ್ಷಿ-1 ಜವರೇಗೌಡ ರವರು ಮಹದೇಶ್ವರ ದೇವಸ್ಥಾನದ ಬೀದಿಯಲ್ಲಿರುವ ಮನೆಗಳಿಗೆ ನಲ್ಲಿ ನೀರು ಬಿಟ್ಟು, ಸಾಕ್ಷಿ-3 ರವರ ಮನೆ ಮುಂಭಾಗದ ರಸ್ತೆಯಲ್ಲಿ ನಿಂತಿದ್ದಾಗ, ಅಲ್ಲಿಗೆ ಬಂದ ಆರೋಪಿಯು ನಮ್ಮ ಬೀದಿಗೆ ನೀರು ಬಿಡುವಂತೆ ಕೇಳಿದಾಗ ಸಾಕ್ಷಿ-1 ರವರು ನಿಮ್ಮ ಬೀದಿಗೆ ನೀರು

ಬಿಟ್ಟಿರುವುದಾಗಿ ಹೇಳಿದಾಗ ಆರೋಪಿಯು ನಮ್ಮ ನಲ್ಲಿಗೆ ನೀರು ಹತ್ತುತ್ತಿಲ್ಲ ಇನ್ನೂ ಜೋರಾಗಿ ನೀರು ಬಿಡುವಂತೆ ಹೇಳಿದಾಗ ಸಾಕ್ಷಿ-1ರವರು ಗ್ರಾಮದ ಎಲ್ಲಾ ಬೀದಿಗಳಿಗೂ ಸಮಾನವಾಗಿ ಬಿಟ್ಟಿದ್ದೇನೆಂದು ಹೇಳಿದಾಗ ಆರೋಪಿಯಾದ ನೀವು ಅಪರಾಧ ಎಸಗುವ ಉದ್ದೇಶದಿಂದ ಸಾಕ್ಷಿ-1 ರವರಿಗೆ ಬೋಳಿಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **504** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಎಸಗುವ ಉದ್ದೇಶದಿಂದ ಸಾಕ್ಷಿ-1 ರವರ ಕತ್ತಿನ ಪಟ್ಟಿ ಹಿಡಿದು ಅಕ್ರಮ ತಡೆಯನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **341** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಎಸಗುವ ಉದ್ದೇಶದಿಂದ, ಸಾಕ್ಷಿ-1ರವರಿಗೆ ಕೈಯಿಂದ ಕಪಾಲಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **323** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

4. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಎಸಗುವ ಉದ್ದೇಶದಿಂದ ಸಾಕ್ಷಿ-1ರವರಿಗೆ ಕಲ್ಲಿನಿಂದ ಬಲದ ಮಂಡಿಗೆ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ

ಸಂಹಿತೆ ಕಲಂ **324** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ನಮ್ರತಾ ಎಸ್. ಹೊಸಮಠ)**
ದಿನಾಂಕಃ **05.08.2025** ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. ಸಂಖ್ಯೆಃ 1505/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ರವಿ
ತಂದೆ - ಸಿದ್ದೇಗೌಡ

ಭಾರತೀಯ ದಂಡ ಸಂಹಿತೆ ಕಲಂ 240(2) ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

**(ನಮ್ರತಾ ಎಸ್. ಹೊಸಮಠ)**
ದಿನಾಂಕಃ **05.08.2025** ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.